ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೩೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಬುಧವಾರ, ದಿನಾಂಕ: ೨೨ನೇ ನವೆಂಬರ್, ೨೦೧೭**

---

**ಸಮೂಹ – III**

೧. ಕಂದಾಯ ಸಚಿವರು.

೨. ಕಾನೂನುಕ ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.

೩. ಅರಣ್ಯ ಸಚಿವರು.

೪. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.

೫. ಕಾರ್ಮಿಕ ಸಚಿವರು.

೬. ವಸತಿ ಸಚಿವರು.

೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು.

---

**ಅತಿವೃಷ್ಟಿ ಮತ್ತು ಅನಾವೃಷ್ಟಿ ಬೆಳೆ ಹಾನಿ ಮತ್ತು ಪರಿಹಾರ ಕುರಿತು**

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೫೧ (೪೪೮೧) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮುಂಗಾರು ಮಳೆ ಕೈಕೊಟ್ಟು ರೈತರು ಸಂಕಷ್ಟಕ್ಕೀಡಾಗಿದ್ದು ಹಿಂಗಾರು ಮಳೆಯು ಹೆಚ್ಚಾಗಿ ಬಂದಿದ್ದರಿಂದ ರೈತರು ಬೆಳೆದಂತಹ ಫಸಲು–ಬೆಳೆಗಳು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅವರುಗಳಿಗೆ ಯಾವ ಪರಿಹಾರಗಳನ್ನು ನೀಡಿದೆ ;

(ಇ) ರಾಜ್ಯದ ಯಾವ ಯಾವ ಭಾಗಗಳಲ್ಲಿ ಯಾವ ಯಾವ ಬೆಳೆಗಳ ನಷ್ಟವು ಸಂಭವಿಸಿದೆ ನಷ್ಟದ ಪ್ರಮಾಣವೆಷ್ಟು ; (ಜಿಲ್ಲಾವಾರು ಬೆಳೆಗಳವಾರು ಪೂರ್ಣ ವಿವರ ಒದಗಿಸುವುದು)

(ಈ) ರೈತರಿಗೆ ಬಿತ್ತಿದ ಬೀಜದ ಬೆಲೆಯೂ ಸಿಗದೆ ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ರೀತಿಯ ಪರಿಹಾರಗಳನ್ನು ಸರ್ಕಾರ ನೀಡಿದೆ ; ಪರಿಹಾರ ಮೊತ್ತ ನೀಡಲು ಅನುಸರಿಸಲಾಗುವ ಮಾನದಂಡಗಳೇನು ; ಪರಿಹಾರದ ಮೊತ್ತವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರಾಜ ಕಾಲುವೆ ಒತ್ತುವರಿ ತೆರವಿಗೆ ಸಂಬಂಧಿಸಿದಂತೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೫೨ (೪೬೧೨) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಉತ್ತರ ಅಪರ ತಾಲ್ಲೂಕು, ಯಲಹಂಕ ಹೋಬಳಿ, ಆವಲಹಳ್ಳಿ ಗ್ರಾಮ ಮತ್ತು ಇತರೆ ಗ್ರಾಮಗಳಿಗೆ ಇರುವ ಸಂಪರ್ಕಿತ ಕಾಲುದಾರಿಗಳು ಮತ್ತು ಮಳೆ ನೀರು ಹರಿದು ಹೋಗಲು ಇರುವ ರಾಜ ಕಾಲುವೆಗಳ ಒತ್ತುವರಿ ತೆರವಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಿಗೆ ಮತ್ತು ತಹಶೀಲ್ದಾರ್ ರವರಿಗೆ ದೂರು ಸಲ್ಲಿಸಲಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ?

## ಗೃಹ ಮಂಡಳಿಯ ಮನೆ ಹಂಚಿಕೆಯಲ್ಲಿ ಭಾರಿ ಅವ್ಯವಹಾರ ನಡೆದಿರುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೫೩ (೪೫೭೨) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಗೃಹ ಮಂಡಳಿಯ ಮನೆ/ನಿವೇಶನ ಹಂಚಿಕೆಗೆ ಇರುವ ಮಾನದಂಡಗಳೇನು ;

(ಆ) ಗೃಹ ಮಂಡಳಿಯಿಂದ ವಿಜಯಪುರ ನಗರದಲ್ಲಿ ಮನೆ ಹಂಚಿಕೆ ಮಾಡುವ ಸಂದರ್ಭದಲ್ಲಿ ಭಾರಿ ಅವ್ಯವಹಾರ ನಡೆದಿದೆ ಎಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ವಿಜಯಪುರ ಗೃಹ ಮಂಡಳಿಗೆ ಮನೆ ಹಂಚಿಕೆಗಾಗಿ ಪಾವತಿಸಿದ ಸಾರ್ವಜನಿಕರ ಹಣದ ಬಗ್ಗೆ ಯಾವುದೇ ಲೆಕ್ಕ ಪತ್ರ ಇಲ್ಲದಿರುವ ಕುರಿತು ಹಾಗೂ ಸರ್ಕಾರದ ಮಾರ್ಗಸೂಚಿಯನ್ನು ಪಾಲಿಸದೇ ಮನೆಗಳನ್ನು ಹಂಚಿಕೆ ಮಾಡಿದ್ದಾರೆ ಎಂಬ ಆರೋಪದ ಬಗ್ಗೆ ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೆ ; ಪರಿಗಣಿಸಿದ್ದರೆ, ಸರ್ಕಾರವು ತೆಗೆದುಕಕೊಂಡಿರುವ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಮೂಲ ಗೇಣಿದಾರರ ಹಿತರಕ್ಷಣೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

ಳಜಳ (ಳಜಜ೨) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೂಲಗೇಣಿದಾರರ ಕಾನೂನು ರಚಿಸಿ ಹಲವು ವರ್ಷಗಳಾದರೂ ಮೂಲಗೇಣಿದಾರರಿಗೆ ಮಾಲೀಕತ್ವದ ಹಕ್ಕುಗಳನ್ನು ನೀಡದಿರಲು ಕಾರಣವೇನು; ಮೂಲಗೇಣಿದಾರರ ಕಾನೂನು ಜಾರಿಗೆ ತರಲಾಗುವುದು ಯಾವಾಗ ; (ವಿವರ ನೀಡುವುದು)

(ಆ) ಮೂಲಗೇಣಿದಾರರಿಂದ ಹಕ್ಕು ಪಡೆದುಕೊಳ್ಳಲು ಎಷ್ಟು ವರ್ಷದಿಂದ ಕಾನೂನು ರಚಿಸಲಾಗಿದೆ ; ಯಾವ ಯಾವ ವರ್ಷಗಳಲ್ಲಿ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಮೂಲಗೇಣಿದಾರರ ಬೇಡಿಕೆಯು ನ್ಯೆಜವಾಗಿದ್ದು, ಇಲಾಖೆ ಕೂಡಲೇ ಕ್ರಮ ಕೈಗೊಳ್ಳಲು ಸೂಚಿಸುವುದೇ ?

## ರಾಜ್ಯದ ಅನುದಾನಿತ ಐಟಿಐ ಸಂಸ್ಥೆಗಳಲ್ಲಿ ಪ್ರವೇಶಾತಿ ಸಂಬಂಧದಲ್ಲಿ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

ಳಜಜ (ಳಳ೨೭) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಅನುದಾನಿತ ಐ.ಟಿ.ಐ. ಸಂಸ್ಥೆಗಳಲ್ಲಿ ಪ್ರವೇಶಾತಿ ಸಂಬಂಧದಲ್ಲಿ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕ ಎಷ್ಟು ; ಇದನ್ನು ಎಂದು ನಿಗದಿಪಡಿಸಲಾಗಿದೆ ;

(ಆ) ಈ ಶುಲ್ಕವನ್ನು ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಇ) ಈ ಕುರಿತಾಗಿ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ;

(ಈ) ಐ.ಟಿ.ಐ. ಸಂಸ್ಥೆಗಳಲ್ಲಿ ಒಂದು ವೃತ್ತಿ ಘಟಕ ನಡೆಸಲು ತಗಲುವ ವೆಚ್ಚ ಹಾಗೂ ಪ್ರತಿ ವಿದ್ಯಾರ್ಥಿಗೆ ಸರ್ಕಾರ ಖರ್ಚು ಮಾಡುತ್ತಿರುವ ಹಣ ಎಷ್ಟು ?

## ದಮನಿತ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ವಸತಿ ಕಲ್ಪಿಸುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೪೫೬ (೪೫೮೯) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ದಮನಿತ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ಸಾಮಾಜಿಕವಾಗಿ/ಶೈಕ್ಷಣಿಕವಾಗಿ/ಆರ್ಥಿಕವಾಗಿ ಹಿಂದುಳಿದಿದ್ದು, ಯಾವೊಂದು ಸೂರಿಲ್ಲದೇ ಅತ್ಯಂತ ನಿಕೃಷ್ಟವಾದ ಜೀವನ ನಡೆಸುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಸಹಾಯಕ ಜೀವನ ನಡೆಸುತ್ತಿರುವ ದಮನಿತ ಮಹಿಳೆಯರಿಗೆ ಒಂದು ಸಾವಿರ ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ಒಂದು ಸಾವಿರ ವಸತಿಗಳನ್ನು ನೀಡಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಇ) ೮೩ ವರ್ಷ ತುಂಬಿರುವ ಕನ್ನಡ ಚಿತ್ರರಂಗದಲ್ಲಿ ಹೆಚ್ಚಿನ ಕಾರ್ಮಿಕ ವರ್ಗದವರಿಗೆ ಇಂದಿಗೂ ಕೂಡ ಒಂದು ಸೂರಿಲ್ಲದೇ ದಿನಗೂಲಿ ಕೆಲಸ ಮಾಡಿ ಜೀವನ ನಡೆಸುತ್ತಿದ್ದಾರೆ. ಕರ್ನಾಟಕ ಸರ್ಕಾರ ಒಂದು ಲಕ್ಷ ವಸತಿ ನೀಡುವ ಮಹತ್ವಕಾರ್ಯ ಕೈಗೊಂಡಿದೆ, ಈ ಯೋಜನೆಯಲ್ಲಿ ಕನಿಷ್ಠ ೧೦೦೦ ಮನೆಗಳನ್ನು ಕನ್ನಡ ಚಿತ್ರರಂಗದಲ್ಲಿ ದುಡಿಯುವ ಕಾರ್ಮಿಕರಿಗೆ ಕೊಡಲು ಸರ್ಕಾರವು ಚಿಂತಿಸುವುದೇ ?

## ಕೃಷ್ಣ ಮೇಲ್ದಂಡೆ ೩ನೇ ಹಂತದ ಕಾಮಗಾರಿ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೫೭ (೪೫೮೧) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ೩ನೇ ಹಂತದ ಕಾಮಗಾರಿಯ ಪ್ರಸ್ತಾವ ಆಗಿದ್ದು ಯಾವಾಗ ;

(ಆ) ಸದರಿ ಕಾಮಗಾರಿಯ ವೆಚ್ಚ ಪರಿಷ್ಕರಣೆಯಾಗಿರುವುದು ನಿಜವೇ ; (ವಿವರ ನೀಡುವುದು)

(ಇ) ಸದರಿ ಯೋಜನೆಯಲ್ಲಿ ಆಲಮಟ್ಟಿ ಅಣೆಕಟ್ಟೆ ಎತ್ತರವನ್ನು ಏರಿಸುವ ಕುರಿತು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು) ಸದರಿ ಕಾಮಗಾರಿಗೆ ಎಷ್ಟು ಎಕರೆ ಭೂಮಿಯ ಭೂಸ್ವಾಧೀನದ ಅಗತ್ಯವಿದೆ ;

(ಈ) ಈ ಸಂಬಂಧ ಭೂಮಾಲಿಕ ರೈತರಿಗೆ ನೀಡಬೇಕಾದ ಪರಿಹಾರ ಪ್ಯಾಕೇಜ್ ಸಿದ್ಧವಾಗಿದೆಯೇ ? (ವಿವರ ನೀಡುವುದು)

## ನಾಲೆಗಳಿಗೆ ಸಿ.ಟಿ.ಸಿ. ನಿರ್ಮಾಣ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೫೮ (೪೪೮೫) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನ ನದಿ ಪಾತ್ರದಲ್ಲಿರುವ ಗ್ರಾಮಗಳ ನಾಲಾ, ದಾರಿ ಜಮೀನುಗಳಿಗೆ ರೈತರು ಹೋಗಲು ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಾಲೆಗಳಲ್ಲಿ ಹೆಚ್ಚು Canals ಗಳ ನೀರು Seepage ನೀರು ಬರುವುದರಿಂದ ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಎಷ್ಟು Bridge ಅಥವಾ Box Culvert ಗಳನ್ನು ನಿರ್ಮಿಸಲಾಗಿದೆ ;

(ಇ) ಇನ್ನು ಎಷ್ಟು ಸಿ.ಟಿ.ಸಿ.ಗಳ ನಿರ್ಮಾಣ ಮಾಡಬೇಕಾಗಿದೆ ;

(ಈ) ಯಾವ ಕಾಲಮಿತಿಯೊಳಗೆ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ?

## Concent for Establishment ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೪೫೫ (೪೬೦೦) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಜಲಕಾಯ್ದೆ ೧೯೭೪ ಹಾಗೂ ವಾಯು ಕಾಯ್ದೆ ೧೯೮೧ರ ಪ್ರಕಾರ ಕರ್ನಾಟಕ ರಾಜ್ಯ ವಾಯು ಮಾಲಿನ್ಯ ಮಂಡಳಿಯಿಂದ ಯಾವುದೇ ರೀತಿಯ ಒಪ್ಪಿಗೆ ಪತ್ರ (Concent for Establishment and Concent for Operation) ಪಡೆಯದೆ ಕಟ್ಟಡ ನಿರ್ಮಾಣ, ಕಾರ್ಖಾನೆ ಹಾಗೂ ಇತರೆ ಮಾಲಿನ್ಯಕ್ಕೆ ಒಳಪಡುವ ಪ್ರಕರಣಗಳು ಇದೆಯೇ ; ಇದ್ದಲ್ಲಿ ಸಂಪೂರ್ಣವಾದ ಮಾಹಿತಿ ನೀಡುವುದು ;

(ಆ) ಒಪ್ಪಿಗೆ ಪತ್ರ ಪಡೆಯದೆ ಕಟ್ಟಿದ ಕಟ್ಟಡ, ಕಾರ್ಖಾನೆ ಹಾಗೂ ಇತರೆ ಮಾಲಿನ್ಯಕ್ಕೆ ಸಂಬಂಧಿಸಿದಂತೆ ಉಲ್ಲಂಘನೆಯಾದ ಪ್ರಕರಣಗಳಿಗೆ ಆಡಳಿತಾತ್ಮಕ ವೆಚ್ಚ ಪಡೆದು ಸಕ್ರಮಗೊಳಿಸಲಾಗಿದೆಯೇ ; ಇದ್ದಲ್ಲಿ ಸಂಪೂರ್ಣವಾದ ಮಾಹಿತಿ ನೀಡುವುದು ;

(ಇ) ಕಟ್ಟಡ, ಕಾರ್ಖಾನೆ ಹಾಗೂ ಜಲ ಕಾಯ್ದೆ ೧೯೭೪ ಹಾಗೂ ವಾಯು ಕಾಯ್ದೆ ೧೯೮೧ರ ಅಡಿಯಲ್ಲಿ ಉಲ್ಲಂಘನೆಯಾದ ಪ್ರಕರಣಗಳು ಸರ್ಕಾರ ಅಥವಾ ಇಲಾಖೆಯಲ್ಲಿ ಇದ್ದಲ್ಲಿ, ಇಂದಿನವರೆವಿಗೂ ಕೈಗೊಂಡ ಕ್ರಮದ ಮಾಹಿತಿ ನೀಡುವುದು ?

### ಉಪವಲಯ ಅರಣ್ಯಾಧಿಕಾರಿಗಳ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೪೬೦ (೪೫೯) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಪವಲಯ ಅರಣ್ಯಾಧಿಕಾರಿ ವೃಂದವನ್ನು ಬಿ.ಎಸ್.ಸಿ. ಅರಣ್ಯಶಾಸ್ತ್ರ/ ವಿಜ್ಞಾನ ಪದವಿ ಮೇಲೆ ನೇಮಕ ಮಾಡಿಕೊಳ್ಳುತ್ತಿದ್ದು, ವೇತನ ಶ್ರೇಣಿ ಪಿ.ಯು.ಸಿ. ವಿಜ್ಞಾನದ ಮೇಲೆ ನಿಗದಿಪಡಿಸಿದ್ದು, ಶೈಕ್ಷಣಿಕ ಅರ್ಹತೆಗೆ ತಕ್ಕ ವೇತನ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಸಕ್ತ ವೇತನ ಆಯೋಗದಲ್ಲಿ ಪದವಿ ಮಟ್ಟದ ವೇತನ ಶ್ರೇಣಿಗೆ ನಿಗದಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಸಾರ್ವತ್ರಿಕ ವರ್ಗಾವಣೆಯಲ್ಲಿ ಜೇಷ್ಠತೆ ಪಾಲನೆ ಆಗದಿರುವುದು ಹಾಗೂ ೨೦೦೮ ರಿಂದ ೨೦೧೭ರ ವರೆಗೆ ಉಪವಲಯ ಅರಣ್ಯಾಧಿಕಾರಿ ವೃಂದದ ಜೇಷ್ಠತಾ ಪಟ್ಟಿ ತಯಾರಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಜೇಷ್ಠತಾ ಪಟ್ಟಿ ತಯಾರಿಸದೆ ಇರುವ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮವೇನು ;

(ಇ) ೨೦೦೮ ರಿಂದ ಇಲ್ಲಿಯವರೆಗೆ ವನಪಾಲಕ/ಉಪವಲಯ ಅರಣ್ಯಾಧಿಕಾರಿಗಳ ಹುದ್ದೆಗೆ ಮುಂಬಡ್ತಿ ಪಡೆದ ಅರಣ್ಯ ರಕ್ಷಕರೆಷ್ಟು ;

(ಈ) ೨೦೦೮ ರಿಂದ ಇಲ್ಲಿಯವರೆಗೆ ಖಾಲಿ ಇರುವ ವಲಯ ಅರಣ್ಯಾಧಿಕಾರಿಗಳ ಹುದ್ದೆಗಳನ್ನು ಮುಂಬಡ್ತಿಯಿಂದ ಹಾಗೂ ನೇರ ನೇಮಕಾತಿಯಿಂದ ಭರ್ತಿ ಮಾಡಲಾಗಿದೆಯೇ ? (ವಿವರಗಳನ್ನು ನೀಡುವುದು)

## ಕಾವೇರಿ ನೀರಾವರಿ ನಿಗಮದಲ್ಲಿ ಪ್ರತ್ಯೇಕ ಸರ್ವೆ (ಭೂಮಾಪನ) ವಿಭಾಗ ಇಲ್ಲದೆ ಇರುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೪೬೧ (೪೪೪೧) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾವೇರಿ ನೀರಾವರಿ ನಿಗಮ ವ್ಯಾಪ್ತಿಯಲ್ಲಿನ ಕೆರೆ, ನಾಲೆ, ಪಿಕಪ್‌ಗಳ ಸರ್ವೆ ಮಾಡಲು ಶಾಶ್ವತ ಭೂಮಾಪನ ಸಿಬ್ಬಂದಿ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾವೇರಿ ನೀರಾವರಿ ನಿಗಮ ವ್ಯಾಪ್ತಿಯಲ್ಲಿ ಬರುವ ಕೆರೆ ಕಟ್ಟೆಗಳನ್ನು ಸರ್ವೆ ಮಾಡಲು ಇಲಾಖೆಯಲ್ಲಿ ಸಿಬ್ಬಂದಿಗಳು ಇಲ್ಲದೆ ಕಂದಾಯ ಇಲಾಖೆಯ ಭೂಮಾಪಕರಿಂದ ಅಳತೆ ಮಾಡಿಸುವುದರಿಂದ ತೊಂದರೆಯಾಗುತ್ತಿರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ತೊಂದರೆಯನ್ನು ನಿವಾರಿಸುವ ನಿಟ್ಟಿನಲ್ಲಿ ನೀರಾವರಿ ಇಲಾಖೆಗೆ ಶಾಶ್ವತ ಭೂಮಾಪಕ ಸಿಬ್ಬಂದಿಗಳನ್ನು ನೇಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಂವಿಧಾನ ೩೭೧ಜೆ ಅಡಿಯಲ್ಲಿ ಪ್ರಮಾಣ ಪತ್ರ ಪಡೆಯುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೨ (೪೫೪) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಂವಿಧಾನದ ೩೭೧ನೇ ಕಲಂ ಅಡಿಯಲ್ಲಿ ಇಲ್ಲಿಯವರೆಗೆ ಎಷ್ಟು ಜನ ಪ್ರಮಾಣ ಪತ್ರ ಪಡೆದಿದ್ದಾರೆ ; ಇದರಲ್ಲಿ ಶಿಕ್ಷಣಕ್ಕೆ ಹಾಗೂ ಉದ್ಯೋಗಕ್ಕಾಗಿ ಪಡೆದವರು ಎಷ್ಟು ಜನ ; ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯಲ್ಲಿನ ಎಲ್ಲಾ ಜಿಲ್ಲೆಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ೩೭೧ ಕಲಂ (ಜೆ) ಪ್ರಮಾಣ ಪತ್ರ ನೀಡಲು ಅನುಸರಿಸುತ್ತಿರುವ ನಿಯಮಗಳೇನು ? (ಸಂಪೂರ್ಣ ವಿವರ ನೀಡುವುದು)

## ವಸತಿ ಯೋಜನೆ ಅನುಷ್ಠಾನದಲ್ಲಿನ ವಿಳಂಬದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೩ (೪೬೦೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಸತಿ ಯೋಜನೆಯ ಫಲಾನುಭವಿ ಆಯ್ಕೆಯ ವಿಧಾನ ಯಾವುದು ; ಈ ಕುರಿತು ಮಾನ್ಯ ಉಚ್ಛನ್ಯಾಯಾಲಯ ನೀಡಿರುವ ಆದೇಶ/ನಿರ್ದೇಶನಗಳೇನು;

(ಆ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಎಷ್ಟು ಮನೆ ನಿರ್ಮಾಣ ಮಾಡಲು ಅನುಮೋದನೆ ನೀಡಲಾಗಿದೆ ; (ಜಿಲ್ಲಾವಾರು ಪಟ್ಟಿ ನೀಡುವುದು) ಪ್ರಗತಿಯ ಹಂತಗಳೇನು ;

(ಇ) ಹೀಗೆ ಭೌತಿಕ ಪ್ರಗತಿ ವರದಿಯನ್ನು ಸಾಧಿಸಿದ ಪ್ರತಿ ಮನೆಗೆ ಹಣ ಬಿಡುಗಡೆಯಾಗಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ;

(ಈ) ಕಳೆದ ೪ ವರ್ಷಗಳಿಂದ ಭೌತಿಕ ಪ್ರಗತಿಯಾದರೂ ಹಣ ಬಿಡುಗಡೆಯಾಗದೆ ಇರುವ, ರದ್ದಾದ, ಪ್ರಗತಿ ಸಾಧಿಸದೆ ಇರುವ ಮನೆಗಳ ಸಂಖ್ಯೆ ಎಷ್ಟು ; ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಅನುದಾನ ಬಿಡುಗಡೆಯಾಗದೇ ಇರುವ ಕುರಿತು ಅಹವಾಲನ್ನು ಸರ್ಕಾರಕ್ಕೆ ಕಳುಹಿಸುತ್ತಿರುವುದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ವಸತಿ ಯೋಜನೆಯ ಫಲಾನುಭವಿ ಆಯ್ಕೆಯಿಂದ, ಸಂಪೂರ್ಣ ಅನುಷ್ಠಾನದ ಜವಾಬ್ದಾರಿಯನ್ನು ಗ್ರಾಮ ಪಂಚಾಯತ್‌ಗಳಿಗೆ ನೀಡುವ ಕುರಿತು ಸರ್ಕಾರದ ನಿಲುವೇನು ?

## ತುಮಕೂರು ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

ಳ೬ಳ (ಳಳಲಳ) ಕಂದಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಮಕೂರು ಜಿಲ್ಲೆಯಲ್ಲಿ ಕಂದಾಯ ಇಲಾಖೆಗೆ ಸೇರಿದ ಮಂಜೂರಾತಿ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ಅಧಿಕಾರಿ/ನೌಕರರ ಸಂಖ್ಯೆ ಎಷ್ಟು, ವೃಂದವಾರು/ತಾಲ್ಲೂಕು/ಹೋಬಳಿವಾರು/ಕಛೇರಿವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಈ ಮಂಜೂರಾತಿ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳು ಎಷ್ಟು ವರ್ಷದಿಂದ ಖಾಲಿ ಬಿದ್ದಿವೆ ;

(ಇ) ನೌಕರರಿಲ್ಲದೆ ಸಾರ್ವಜನಿಕರ ಕೆಲಸ ಕಾರ್ಯಗಳು ವಿಪರೀತವಾಗಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಜಿಲ್ಲಾಡಳಿತ ಮತ್ತು ಸರ್ಕಾರ ಇಲ್ಲಿಯ ತನಕ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕೌಶಲ್ಯ ಕರ್ನಾಟಕ ಯೋಜನೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

ಳ೬೫ (ಳಳಳ೬) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮುಖ್ಯಮಂತ್ರಿಗಳ 'ಕೌಶಲ್ಯ ಕರ್ನಾಟಕ ಯೋಜನೆಯಡಿ' ಕಳೆದ ವರ್ಷ ವಿವಿಧ ಇಲಾಖೆಗಳ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಒಂದುಗೂಡಿಸಿದ ನಂತರ ಗುಣಾತ್ಮಕ ಬದಲಾವಣೆಗಳೇನಾದರೂ ಕಂಡಿವೆಯೆ; (ವಿವರಗಳನ್ನು ನೀಡುವುದು)

(ಆ) ಕೌಶಲ್ಯ ಕರ್ನಾಟಕ ಯೋಜನೆಯಡಿಯ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ (ಸಿಡಾಕ್) ಕೇಂದ್ರ ಪಾತ್ರವೇನು ; ವಿವಿಧ ಕೌಶಲ್ಯ ಅಭಿವೃದ್ಧಿ ಕರ್ಯಕ್ರಮಗಳಿಗಾಗಿ ತರಬೇತಿ ನೀಡುವ ಮತ್ತು ಅವುಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸುವಷ್ಟು ಸಂಖ್ಯಾ ಬಲದ ಸಿಬ್ಬಂದಿ ಸಿಡಾಕ್‌ನಲ್ಲಿ ಇದೆಯೆ ; (ವಿವರ ನೀಡುವುದು)

(ಇ) ಸಿಡಾಕ್ ೨೦೧೬-೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ಕೈಗೊಂಡ ವಿವಿಧ ಕಾರ್ಯಕ್ರಮಗಳ ಕಾರ್ಯಕ್ರಮವಾರು ವಿವರ ೨೦೧೭-೧೮ನೇ ಸಾಲಿನ ಅಕ್ಟೋಬರ್ ಅಂತ್ಯದವರೆಗೆ ಸಾಧಿಸಿದ ವಿವಿಧ ಕಾರ್ಯಕ್ರಮಗಳ ಪ್ರಗತಿಯ ವಿವರಗಳನ್ನು ನೀಡುವುದು ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500